ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ
ಒಟ್ಟು ಪ್ರಶ್ನೆಗಳು – ೧೫

ಪಟ್ಟಿ–೦೯

# ಕರ್ನಾಟಕ ವಿಧಾನ ಪರಿಷತ್ತು

## ನೂರ ಇಪ್ಪತ್ತೈದನೆಯ ಅಧಿವೇಶನ

## ಗುರುವಾರ, ದಿನಾಂಕ: ೩ನೇ ಜುಲೈ ೨೦೧೪

---

**ಸಮೂಹ – IV**

೧. ಮುಖ್ಯಮಂತ್ರಿಗಳು

೨. ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪಶುಸಂಗೋಪನೆ ಸಚಿವರು

೩. ಗೃಹ ಸಚಿವರು

೪. ನಗರಾಭಿವೃದ್ಧಿ ಸಚಿವರು

---

**ಬಿ.ಬಿ.ಎಂ.ಪಿ. ಮುಂದಿರುವ ನಾಗರಿಕ ಸಮಸ್ಯೆಗಳು**

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) –**

೧೨೧ (೫೬೨) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಸ ವಿಲೇವಾರಿ ಒಳಗೊಂಡಂತೆ, ಬಿ.ಬಿ.ಎಂ.ಪಿ. ಮುಂದಿರುವ ನಾಗರಿಕ ಸಮಸ್ಯೆ/ಬೇಡಿಕೆಗಳು ಯಾವುವು ;

(ಆ) ಅವುಗಳ ಪರಿಹಾರದ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳಾವುವು ;

(ಇ) ಮಳೆಗಾಲದಲ್ಲಿ ಉಲ್ಬಣಗೊಳ್ಳುವ ಒಳಚರಂಡಿ ಸಮಸ್ಯೆಯನ್ನು ಎದುರಿಸಲು ಬಿ.ಬಿ.ಎಂ.ಪಿ. ಹಾಕಿಕೊಂಡಿರುವ ಯೋಜನೆಗಳಾವುವು ?

## ಬಾಂಗ್ಲಾ ಪ್ರಜೆಗಳ ಅಕ್ರಮ ನೆಲೆ

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) –**

೧೨೨ (೬೦೯) ಗೃಹ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ಬಾಂಗ್ಲಾ ದೇಶದ ಪ್ರಜೆಗಳು ಅಕ್ರಮವಾಗಿ ಬೆಂಗಳೂರಿನಲ್ಲಿ ನೆಲೆಸಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ; ಎಷ್ಟು ಸಂಖ್ಯೆಯಲ್ಲಿದ್ದಾರೆ ಎನ್ನುವ ಮಾಹಿತಿ ಇದೆಯೇ ; ಇದ್ದಲ್ಲಿ, ಮಾಹಿತಿ ನೀಡುವುದು ; ಸಮಸ್ಯೆ ನಿವಾರಣೆಗೆ ಸರ್ಕಾರ ತೆಗೆದುಕೊಳ್ಳುತ್ತಿರುವ ಕ್ರಮವೇನು ?

## ಮಹಾನಗರ ಪಾಲಿಕೆಯಲ್ಲಿ ಖಾಲಿ ಹುದ್ದೆಗಳ ಶೀಘ್ರ ಭರ್ತಿ

**ಶ್ರೀ ಮೃತ್ಯುಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೨೩ (೬೫೬) ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಈ ಹಿಂದೆ ಬಳ್ಳಾರಿ ಮಹಾನಗರ ಪಾಲಿಕೆಯಲ್ಲಿರುವ ಖಾಲಿ ಹುದ್ದೆಗಳನ್ನು ಶೀಘ್ರ ಭರ್ತಿ ಮಾಡಲಾಗುವುದು ಎಂದು ತಿಳಿಸಲಾಗಿತ್ತು. ಆದರೆ ಈವರೆಗೂ ಹುದ್ದೆಗಳು ಭರ್ತಿಯಾಗದಿರಲು ಕಾರಣಗಳೇನು ;

(ಆ) ಸಿಬ್ಬಂದಿಗಳ ಕೊರತೆಯಿಂದ ಬಳ್ಳಾರಿ ನಗರದ ತುಂಬಾ ಕೊಳಚೆ ತುಂಬಿದ್ದು ಕಸ–ಕೊಳಚೆ ಬೇರೆಡೆ ಸಾಗಿಸಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಳ್ಳಲಿದೆ ;

(ಇ) ಖಾಲಿಯಿರುವ ಹುದ್ದೆಗಳನ್ನು ಶೀಘ್ರವಾಗಿ ಯಾವ ಕಾಲಮಿತಿಯಲ್ಲಿ ಭರ್ತಿ ಮಾಡಿ ಬಳ್ಳಾರಿ ಮಹಾನಗರ ಪಾಲಿಕೆಯ ಕೆಲಸ ಕಾರ್ಯಗಳು ಸುಲಭವಾಗಿ ನಡೆಯಲು ಅನುವು ಮಾಡಿಕೊಡಲಾಗುವುದು ?

## ಶ್ರೀ ರಂಗನಾಥಸ್ವಾಮಿ ದೇವಸ್ಥಾನದ ಮುಂಭಾಗದ ಖಾಲಿ ಜಾಗದ ಅಭಿವೃದ್ಧಿ

**ಶ್ರೀ ಸಿ.ಹೆಚ್. ವಿಜಯಶಂಕರ (ವಿಧಾನಸಭೆಯಿಂದ ಚುನಾಯಿತರಾದವರು) –**

೧೨೪ (೬೨೪) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲೆಯ ಐತಿಹಾಸಿಕ ನಗರವಾದ ಶ್ರೀರಂಗಪಟ್ಟಣದ ಶ್ರೀ ರಂಗನಾಥ ದೇವಾಲಯದ ಮುಂಭಾಗದಲ್ಲಿ ಖಾಲಿ ಇರುವ ಒಟ್ಟು ಭೂ ಪ್ರದೇಶವೆಷ್ಟು;

(ಆ) ಈ ಜಾಗವನ್ನು ಯಾವ ಯಾವ ಉದ್ದೇಶಗಳಿಗಾಗಿ ಕಾಯ್ದಿರಿಸಲಾಗಿದೆ ;

(ಇ) ದೇವಸ್ಥಾನದ ಮುಂಭಾಗದಲ್ಲಿರುವ ಜಾಗವನ್ನು ಪ್ರವಾಸಿಗಳ ವಾಹನ ನಿಲುಗಡೆಗೆ ಉಪಯೋಗಿಸಲಾಗುತ್ತಿದೆಯೇ ; ಹಾಗಿದ್ದಲ್ಲಿ, ವಾಹನ ನಿಲುಗಡೆಗೆ ಅವಶ್ಯ ಇರುವಷ್ಟು ಕಾಯ್ದಿರಿಸಿ, ಉಳಿದ ಜಾಗವನ್ನು ವ್ಯವಸ್ಥಿತವಾಗಿ ಉದ್ಯಾನವನವನ್ನಾಗಿ ನಿರ್ಮಿಸುವ ಯೋಜನೆ ಸರ್ಕಾರಕ್ಕಿದೆಯೇ ;

ಈ) ದೇವಸ್ಥಾನದ ಅಂದವನ್ನು ಹೆಚ್ಚಿಸಲು ಲಭ್ಯವಿರುವ ಖಾಲಿ ಜಾಗವನ್ನು ವ್ಯವಸ್ಥಿತವಾಗಿ ಬಳಸಿಕೊಳ್ಳಲು ಸರ್ಕಾರದ ಮುಂದಿರುವ ಯೋಜನೆಗಳೇನು ; ಹಾಗೂ ಸದರಿ ಯೋಜನೆಯನ್ನು ಎಷ್ಟು ದಿನಗಳಲ್ಲಿ ಅನುಷ್ಠಾನಗೊಳಿಸಲಾಗುವುದು ? (ವಿವರ ಒದಗಿಸುವುದು)

## ಇರಾಕ್‌ನಲ್ಲಿ ಕನ್ನಡಿಗರ ಸುರಕ್ಷತೆ

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) –**

೧೨೫ (೫೭೬) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಇರಾನ್, ಇರಾಕ್‌ನಲ್ಲಿ ಉಂಟಾಗಿರುವ ಪ್ರಕ್ಷುಬ್ಧ ಸ್ಥಿತಿಯಿಂದಾಗಿ ರಾಜ್ಯದ ನಾಗರಿಕರಿಗೆ ತೊಂದರೆಯಾಗಿದೆಯೇ ;

(ಆ) ರಾಜ್ಯದ ನಾಗರಿಕರು ಇರಾಕ್‌ನಲ್ಲಿ ನೆಲೆಸಿದ್ದಲ್ಲಿ ಅವರ ರಕ್ಷಣೆಗಾಗಿ ಸರ್ಕಾರ ಏನು ಕ್ರಮ ಕೈಗೊಂಡಿದೆ ?

## ಹಾಲು ಉತ್ಪಾದಕರಿಗೆ ಏಕರೂಪದ ಪ್ರೋತ್ಸಾಹಧನ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) –**

೧೨೬ (೬೫೧) ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪಶುಸಂಗೋಪನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿನ ಹಾಲು ಉತ್ಪಾದಕರು ಸರಬರಾಜು ಮಾಡುವ ಹಾಲಿಗೆ ಸರ್ಕಾರದಿಂದ ಪ್ರೋತ್ಸಾಹಧನ ನೀಡಲಾಗುತ್ತಿದೆಯೇ ;

(ಆ) ಹಾಲು ಉತ್ಪಾದಕರು ಸರಬರಾಜು ಮಾಡುವ ಹಾಲಿಗೆ ಏಕರೂಪದ ಪ್ರೋತ್ಸಾಹಧನ ನೀಡಲಾಗುತ್ತಿದೆಯೇ ;

(ಇ) ಹಾಗಾದರೆ ಪ್ರತಿ ಲೀಟರ್ ಹಾಲಿಗೆ ಎಷ್ಟು ಮೊತ್ತದ ಹಣವನ್ನು ಪ್ರೋತ್ಸಾಹಧನವಾಗಿ ನೀಡಲಾಗುತ್ತಿದೆ ; ಎಂದಿನಿಂದ ನೀಡಲಾಗುತ್ತಿದೆ ;

ಈ) ಹಾಲು ಉತ್ಪಾದಕರಿಗೆ ಪ್ರೋತ್ಸಾಹಧನ ನೀಡುವಲ್ಲಿ ಸರ್ಕಾರ ಅನುಸರಿಸುತ್ತಿರುವ ಮಾನದಂಡಗಳೇನು ; (ವಿವರಗಳೊಡನೆ ನೀಡುವುದು)

ಉ) ಸರ್ಕಾರ ಪ್ರೋತ್ಸಾಹಧನವನ್ನು ಪರಿಷ್ಕರಣೆ ಮಾಡುವುದೆ ?

## ಹುಬ್ಬಳ್ಳಿ–ಧಾರವಾಡ ಅವಳಿ ನಗರದಲ್ಲಿನ ಈಜುಕೊಳದ ದುರಸ್ತಿ

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ) –**

೧೨೭ (೫೭೯) ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹುಬ್ಬಳ್ಳಿ–ಧಾರವಾಡ ಅವಳಿ ನಗರಗಳಲ್ಲಿ ಈಜುಕೊಳವನ್ನು ನವೀಕರಿಸಲು ಬಜೆಟ್‌ನಲ್ಲಿ ೨.೫ ಕೋಟಿ ರೂ. ಅನುದಾನ ನಿಗದಿಪಡಿಸಿದ್ದು ನಿಜವೇ ; ಹಾಗಿದ್ದಲ್ಲಿ, ಈ ಎರಡು ಈಜುಕೊಳವನ್ನು ನವೀಕರಿಸಲಾಗಿದೆಯೇ ; ಹಾಗಿದ್ದಲ್ಲಿ, ಅದರ ಪ್ರಗತಿ ಏನು ;

(ಆ) ಕಳೆದ ೨ ವರ್ಷಗಳಿಂದ ಈಜುಕೊಳವನ್ನು ಸಾರ್ವಜನಿಕರಿಗೆ ಉಪಯೋಗಿಸಲು ಇದುವರೆಗೆ ಅನುಮತಿ ನೀಡದಿರಲು ಕಾರಣವೇನು ;

(ಇ) ಈ ಅವಳಿ ನಗರಗಳಲ್ಲಿ ಈಜುಕೊಳವನ್ನು ದುರಸ್ತಿ ಮಾಡಿದ್ದಲ್ಲಿ ಸಾರ್ವಜನಿಕರು ಉಪಯೋಗಿಸಲು ತಕ್ಷಣ ಕ್ರಮ ಕೈಗೊಳ್ಳಲಾಗುವುದೇ ?

## ಕೈಗಾರಿಕಾ ಪ್ರದೇಶಗಳ ವ್ಯಾಪ್ತಿಯಲ್ಲಿ ಮದ್ಯ ಮಾರಾಟ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

೧೨೮ (೫೮೩) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರ ಜಿಲ್ಲಾ ವ್ಯಾಪ್ತಿಯ ಕೈಗಾರಿಕಾ ಪ್ರದೇಶಗಳ ವ್ಯಾಪ್ತಿಯಲ್ಲಿ ಕೆ.ಐ.ಎ.ಡಿ.ಬಿ. ವತಿಯಿಂದ ನೀಡಿರುವ ನಿವೇಶನಗಳಲ್ಲಿ, ಮದ್ಯ ಮಾರಾಟ ಅಂಗಡಿಗಳನ್ನು ತೆರೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಯಾವ ಯಾವ ಕೈಗಾರಿಕಾ ಪ್ರದೇಶಗಳಲ್ಲಿ ಮದ್ಯ ಮಾರಾಟ ಅಂಗಡಿ ತೆರೆಯಲಾಗಿದೆ ? (ವಿವರ ನೀಡುವುದು)

## ಕಿರಿಯ ನೂತನ ವಕೀಲರಿಗೆ ಐದು ವರ್ಷ ಪ್ರೋತ್ಸಾಹಧನ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) –**

೧೨೯ (೬೨೭) ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪಶು ಸಂಗೋಪನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸ್ಟೇಟ್ ಬಾರ್ ಕೌನ್ಸಿಲ್‌ನಲ್ಲಿ ಎಷ್ಟು ಜನ ವಕೀಲರು ರಿಜಿಸ್ಟ್ರೇಶನ್ ಮಾಡಿಸಿರುವರು ;

(ಆ) ಪ್ರತಿ ವರ್ಷ ಎಷ್ಟು ಜನ ವಕೀಲರು ಹೊಸದಾಗಿ ರಿಜಿಸ್ಟ್ರೇಶನ್ ಮಾಡಿಸುವರು ;

(ಇ) ಪ್ರತಿ ವರ್ಷ ಹೊಸದಾಗಿ ರಿಜಿಸ್ಟ್ರೇಶನ್ ಮಾಡಿಸಿದ ವಕೀಲರುಗಳಿಗೆ ಪ್ರತಿ ತಿಂಗಳು ಹತ್ತು ಸಾವಿರ ರೂ.ಗಳಂತೆ ಪ್ರೋತ್ಸಾಹಧನ ಅಥವಾ ಸ್ಟೈಫಂಡ್ ಮೂರು ವರ್ಷಗಳವರೆಗೆ ಮೆಡಿಕಲ್ ಪಿ.ಜಿ. ವಿದ್ಯಾರ್ಥಿಗಳಿಗೆ ಯಾವುದೇ ಜಾತಿ ಆದಾಯ ನಿರ್ಬಂಧನೆ ಇಲ್ಲದೆ ಕೊಡುವಂತೆ ವಕೀಲರುಗಳಿಗೂ ಕೊಡಲು ಕ್ರಮ ಕೈಗೊಳ್ಳಲಾಗುವುದೇ ;

ಈ) ಹತ್ತು ಸಾವಿರ ರೂ.ಗಳ ಪ್ರಕಾರ ಹೊಸದಾಗಿ ರಿಜಿಸ್ಟ್ರೇಶನ್ ಮಾಡಿಸಿದ ವಕೀಲರುಗಳಿಗೆ ವರ್ಷಕ್ಕೆ ಪ್ರೋತ್ಸಾಹಧನ ಅಥವಾ ಸ್ಟೈಫಂಡ್ ಕೊಟ್ಟಲ್ಲಿ ಸರ್ಕಾರದ ಮೇಲೆ ಎಷ್ಟು ಆರ್ಥಿಕ ಹೊರೆ ಬೀಳುವುದು ?

## ಅತ್ಯಾಚಾರಕ್ಕೊಳಗಾಗುತ್ತಿರುವ ಹೆಣ್ಣು ಮಕ್ಕಳು

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೦ (೫೮೨) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಅತ್ಯಾಚಾರಕ್ಕೊಳಗಾಗುತ್ತಿರುವ ಅಪ್ರಾಪ್ತ ಹೆಣ್ಣು ಮಕ್ಕಳ ಸಂಖ್ಯೆ ಎಷ್ಟು ;

(ಆ) ಈ ಸಂಬಂಧವಾಗಿ ಬಂಧಿಸಿರುವವರ ಸಂಖ್ಯೆ ಎಷ್ಟು ; ಇದರಲ್ಲಿ ಆರೋಪಿತರು ಎಷ್ಟು ;

(ಇ) ಅತ್ಯಾಚಾರವೆಸಗಿ ಶಿಕ್ಷೆಗೆ ಒಳಗಾಗಿರುವವರ ಸಂಖ್ಯೆ ಎಷ್ಟು ;

ಈ) ಅತ್ಯಾಚಾರ ಪ್ರಕರಣಗಳನ್ನು ನಿಯಂತ್ರಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಅಕ್ರಮ ಮರಳು ಸಾಗಾಣಿಕೆ

**ಶ್ರೀ ಭಾನುಪ್ರಕಾಶ (ವಿಧಾನಸಭೆಯಿಂದ ಚುನಾಯಿತರಾದವರು) –**

೧೩೧ (೫೮೮) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಅಕ್ರಮ ಮರಳು ಸಾಗಾಣಿಕೆ ಹಾಗೂ ದಾಸ್ತಾನು ಮಾಡುತ್ತಿರುವುದರಿಂದ ಮರಳಿನ ದರದಲ್ಲಿ ಏರಿಕೆ ಆಗಿರುವುದರಿಂದ ಸಾರ್ವಜನಿಕರಿಗೆ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರಾಜ್ಯದಲ್ಲಿ ಮರಳಿನ ಅಕ್ರಮ ದಾಸ್ತಾನು ಮಾಡಿರುವುದರ ಮೇಲೆ ದಾಳಿ ಮಾಡಿ ವಶಪಡಿಸಿಕೊಂಡಿರುವ ಪ್ರಕರಣಗಳೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ವಶಪಡಿಸಿಕೊಂಡಿರುವ ಮರಳನ್ನು ವಿತರಿಸಲು ಸರ್ಕಾರದ ಮಾರ್ಗಸೂಚಿ ಏನು ?

## ಗೃಹ ರಕ್ಷಕ ದಳದಲ್ಲಿ ಅವ್ಯವಹಾರ

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೩೨ (೫೮೧) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾರವಾರ ಜಿಲ್ಲೆಯಲ್ಲಿ ಗೃಹ ರಕ್ಷಕ ದಳದ ಇಲಾಖೆಯಲ್ಲಿ ಭ್ರಷ್ಟಾಚಾರ, ಅವ್ಯವಹಾರ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಆ) ಈಗಾಗಲೇ ಈ ಹಿಂದೆ ಸದರಿ ಇಲಾಖೆಯಲ್ಲಿ ೨೦೦೮–೨೦೧೧ರ ಅವಧಿಯಲ್ಲಿ ಜಿಲ್ಲೆಯಲ್ಲಿ ಸೇವೆ ಸಲ್ಲಿಸುತ್ತಿದ್ದ ಅಧಿಕಾರಿಯು ಗೃಹ ರಕ್ಷಕ ದಳಕ್ಕೆ ಸಂಬಂಧಿಸಿದ

ಸಮವಸ್ತ್ರ ಮತ್ತು ಇತರೆ ಖರೀದಿಯಲ್ಲಿ ಅವ್ಯವಹಾರ ಮಾಡಿದ್ದು ಈ ಕುರಿತು ಸಂಬಂಧಿಸಿದವರ ಮೇಲೆ ಕ್ರಮ ಕೈಗೊಳ್ಳಲಾಗಿದೆಯೇ ? (ವಿವರ ನೀಡುವುದು)

**ಬಿಬಿಎಂಪಿ ವ್ಯಾಪ್ತಿಯಲ್ಲಿನ ಹದಗೆಟ್ಟ ರಸ್ತೆಗಳು**

**ಶ್ರೀ ಇ. ಕೃಷ್ಣಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೩೩ (೫೯೭) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದ ರಸ್ತೆಗಳು ತುಂಬ ಗುಂಡಿ ಬಿದ್ದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಗುಂಡಿ ಬಿದ್ದು ಹದಗೆಟ್ಟಿರುವ ರಸ್ತೆಗಳ ವಿವರ ನೀಡುವುದು ;

(ಆ) ಸರ್ಕಾರ ಗುಂಡಿ ಮುಚ್ಚಲು ಕೈಗೊಂಡ ಕ್ರಮವೇನು ; (ವಿವರ ನೀಡುವುದು)

(ಇ) ಗುಂಡಿ ಮುಚ್ಚಿ ಹದಗೆಟ್ಟಿರುವ ರಸ್ತೆಗಳನ್ನು ಸರಿಪಡಿಸದೆ ಇರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಈ) ಬೆಂಗಳೂರು ರಸ್ತೆಗಳನ್ನು ಗುಂಡಿ ಮುಚ್ಚುವ ಹಾಗೂ ಹದಗೆಟ್ಟ ರಸ್ತೆಗಳನ್ನು ಸರಿಪಡಿಸಿ ನಿರ್ವಹಣೆ ಮಾಡದ ಅಧಿಕಾರಿಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ? (ವಿವರ ನೀಡುವುದು)

**ವರದಿಯಾದ ಅವ್ಯವಹಾರ ಪ್ರಕರಣಗಳು**

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೩೪ (೬೩೭) ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೫ ವರ್ಷಗಳಲ್ಲಿ 'ಮಂಡ್ಯ ನಗರಸಭೆ' ಮತ್ತು 'ಮಂಡ್ಯ ಅಭಿವೃದ್ಧಿ ಪ್ರಾಧಿಕಾರ' ಗಳಲ್ಲಿ ನಡೆದಿದೆ ಎನ್ನಲಾದ ಎಷ್ಟು ಅವ್ಯವಹಾರ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿವೆ ;

(ಆ) ತತ್ಸಂಬಂಧ ಕೈಗೊಂಡಿರುವ ಕ್ರಮಗಳೇನು ? (ವಿಚಾರಣಾ ಹಂತಗಳ ವಿವರಗಳನ್ನೊದಗಿಸುವುದು)

## ಬೆಂಗಳೂರಲ್ಲಿ ವಾಹನ ಸಂಚಾರ ಕಡಿತಗೊಳಿಸುವುದು

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) –**

೧೩೫೫ (೬೫೯) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದಲ್ಲಿ ವಾಹನ ಸಂಚಾರ ದಟ್ಟಣೆ ಕಡಿಮೆ ಮಾಡಲು ಸರ್ಕಾರ ಏನಾದರೂ ಚಿಂತನೆ ಮಾಡಲಾಗಿದೆಯೆ ;

(ಆ) ಈಗಿರುವ ರಸ್ತೆಗೆ ತಕ್ಕಂತೆ ವಾಹನ ಸಂಖ್ಯೆ ೪ ಪಟ್ಟು ಜಾಸ್ತಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ;

(ಇ) ಮನೆಗೆ ಒಂದು ಕಾರು, ಒಂದು ಮೋಟಾರ್ ಬೈಕ್, ಇದಕ್ಕಿಂತ ಜಾಸ್ತಿ ಸಂಖ್ಯೆ ವಾಹನ ಇರುವವರ ಮೇಲೆ ಏನಾದರೂ ಕ್ರಮ ಕೈಗೊಳ್ಳಲು ಚಿಂತಿಸಿದೆಯೆ ;

ಈ) ಇಲ್ಲದಿದ್ದಲ್ಲಿ, ಸುಗಮ ಸಂಚಾರ ವ್ಯವಸ್ಥೆಗೆ ಸರ್ಕಾರ ತೆಗೆದುಕೊಂಡಿರುವ ಕ್ರಮವೇನು ?

**ವಿ. ಶ್ರೀಶ್**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಕಾ.ಸೂ. 282, ಪ್ರತಿಗಳು– 1000 – ಪಿ8